ಕುಡಿಯುವ ನೀರಿನ ಸಮಸ್ಯೆ

343 (1561) : ಶ್ರೀ ಶ್ರೀನಿವಾಸ್ ಎಂ. (ಮಂಡ್ಯ) : ಮಾನ್ಯ ಗ್ರಾಮೀಣ ನೀರು ಪೂರೈಕೆ, ನೈರ್ಮಲ್ಯ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಟಾಸ್ಕ್-ಫೋರ್ಸ್ ಕಮಿಟಿಯಲ್ಲಿ ಗ್ರಾಮೀಣ ಪ್ರದೇಶಗಳ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲು ತೀರ್ಮಾನ ಮಾಡಿ ಹಣ ಬಿಡುಗಡೆ ಮಾಡಲು ಸರ್ಕಾರಕ್ಕೆ ಮನವಿ ಮಾಡಿದ್ದರೂ ಇಲ್ಲಿಯವರೆಗೂ ಹಣ ಬಿಡುಗಡೆ ಮಾಡದಿರಲು ಕಾರಣವೇನು ;

ಆ) ಈ ಸಮಸ್ಯೆ ಬಗೆಹರಿಸಲು ಯಾವಾಗ ಹಣ ಬಿಡುಗಡೆ ಮಾಡಲಾಗುವುದು ; ಸದರಿ ವಿಷಯ ಸರ್ಕಾರದ ಯಾವ ಹಂತದಲ್ಲಿ ಇದೆ ;

ಇ) ಪ್ರತಿ ಕ್ಷೇತ್ರಗಳಿಗೆ ಎಷ್ಟು ಹಣ ನಿಗದಿ ಮಾಡಲಾಗಿದೆ ;

ಈ) ಈ ಹಣವನ್ನು ಹಂತಹಂತವಾಗಿ ಬಿಡುಗಡೆ ಮಾಡಲಾಗುತ್ತದೆಯೇ ಅಥವಾ ಒಂದೇ ಬಾರಿ ಬಿಡುಗಡೆ ಮಾಡಲಾಗುತ್ತದೆಯೇ ; (ಪೂರ್ಣ ವಿವರ ನೀಡುವುದು) ?

ಶ್ರೀ ಎಸ್.ಎ. ರವೀಂದ್ರನಾಥ್ (ಗ್ರಾಮೀಣ ನೀರು ಪೂರೈಕೆ, ನೈರ್ಮಲ್ಯ ಮತ್ತು ಸಕ್ಕರೆ ಸಚಿವರು)-

ಅ) ಅನುದಾನ ಲಭ್ಯತೆ ಮತ್ತು ವಾಸ್ತವಾಂಶ ಆಧರಿಸಿ ಹಣ ಬಿಡುಗಡೆ ಮಾಡಲು ಪರಿಶೀಲಿಸಲಾಗುತ್ತಿದೆ.

ಆ) ಜುಲೈ-06ರ ಅಂತ್ಯದೊಳಗೆ ಸ್ವಲ್ಪ ಅನುದಾನ ಬಿಡುಗಡೆ ಮಾಡಲು ಕ್ರಮ ವಹಿಸಲಾಗುವುದು.

ಇ) ಆಯಾ ಕ್ಷೇತ್ರಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಅನುಮೋದಿತ ತುರ್ತು ಕಾಮಗಾರಿಗಳ ಅಗತ್ಯತೆ ಆಧರಿಸಿ ಕ್ಷೇತ್ರವಾರು ಸ್ವಲ್ಪ ಹಣ ಬಿಡುಗಡೆ ಮಾಡಲಾಗುವುದು.

ಈ) ಈ ಅನುದಾನವನ್ನು ಹಂತ ಹಂತವಾಗಿ ಬಿಡುಗಡೆ ಮಾಡಲಾಗುವುದು.

ಮೀನುಗಾರರ ಸಂಕಷ್ಟ ಪರಿಹಾರ ನಿಧಿ

344 (824) : ಶ್ರೀ ಜಯಪ್ರಕಾಶ್ ಹೆಗ್ಡೆ ಕೆ. (ಬ್ರಹ್ಮಾವರ) : ಮಾನ್ಯ ಮೀನುಗಾರಿಕೆ ಮತ್ತು ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ಮೀನುಗಾರರ ಸಂಕಷ್ಟ ಪರಿಹಾರ ನಿಧಿಯಲ್ಲಿ ಬಾಕಿ ಇರುವ ಪ್ರಕರಣಗಳೆಷ್ಟು ;